# <u>ಕರ್ನಾಟಕ ಸರ್ಕಾರದ ನಡವಳಿಗಳು</u>

<u>ವಿಷಯ:-</u> ಸ್ವಾತಂತ್ರೋತ್ಸವದ ಅಮೃತ ಮಹೋತ್ಸವದಂದು ಮಾನ್ಯ ಮುಖ್ಯಮಂತ್ರಿಯವರಿಂದ ಘೋಷಿಸಿಲಾಗಿರುವ ಹಿಂದುಳಿದ ವರ್ಗಗಳ ನವೋದ್ಯಮಗಳನ್ನು ಪ್ರೋತ್ಸಾಹಿಸಲು ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಇವರ ಮುಖಾಂತರ 'ಅಮೃತ ಸ್ಟಾರ್ಟ್ ಅಪ್' ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

<u>ಓದಲಾಗಿದೆ:-</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಇವರ ಅ.ಸ ಪತ್ರ ಸಂಖ್ಯೆ: ಐಟಿಡಿ 48 ಅಮುಕಾ 2021, ದಿನಾಂಕ: 25.08.2021 ಮತ್ತು ಪತ್ರ ಸಂಖ್ಯೆ: ಕಿಟ್ಸ್/ಎಡಿಎಂಎನ್/ರಿಪೋ/7/2021, ದಿನಾಂಕ:13.10.2021.
2. ಆಯುಕ್ತರು, ಹಿಂವಕ ಇವರ ಏಕಕಡತ ಸಂಖ್ಯೆ: ಹಿಂವಕಇ/ಸಿಬ್ಬಂದಿ-2/ಸಿಆರ್-32/2021-22, ದಿನಾಂಕ:22.09.2021.
3. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 466 ಬಿಎಂಎಸ್ 2021, ದಿನಾಂಕ:04.11.2021.
4. ಆಯುಕ್ತರು, ಹಿಂವಕ ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ಸಿಬ್ಬಂದಿ-2/ಸಿಆರ್-32/2021-22, ದಿನಾಂಕ:03.12.2021.

******

**<u>ಪ್ರಸ್ತಾವನೆ:-</u>**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಅರೆ ಸರ್ಕಾರಿ ಪತ್ರದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ದಿನಾಂಕ:15.08.2021ರ ಸ್ವಾತಂತ್ರೋತ್ಸವದ ಅಮೃತ ಮಹೋತ್ಸವದಂದು ನಾಡಿನ ಸಮಸ್ತ ಜನರನ್ನು ಉದ್ದೇಶಿಸಿ ಮಾಡಿರುವ ಭಾಷಣದಲ್ಲಿ ನೂತನ ಯೋಜನೆಗಳನ್ನು ಪ್ರಕಟಿಸಿದ್ದು, ಇದರಲ್ಲಿ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಇವರ ಮುಖಾಂತರ ಸ್ಟಾರ್ಟ್‌ಅಪ್ ಉತ್ತೇಜನ ಯೋಜನೆಯನ್ನು ಘೋಷಿಸಲಾಗಿದ್ದು, ಈ ಯೋಜನೆಯಡಿ ರಾಜ್ಯದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಹಿಂದುಳಿದ ವರ್ಗ ಮತ್ತು ಅಲ್ಪ ಸಂಖ್ಯಾತ ಸಮುದಾಯಗಳ 75 ಸ್ಟಾರ್ಟ್‌ಅಪ್ ಉದ್ಯಮಗಳಿಗೆ ಉತ್ತೇಜಿಸಲು ಯೋಜಿಸಲಾಗಿರುತ್ತದೆ. ಈ ಹಿನ್ನಲೆಯಲ್ಲಿ, ಪ್ರಸಕ್ತ ಸಾಲಿನಲ್ಲಿ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಕಾರ್ಯಕ್ರಮವಾದ ಎಲಿವೇಟ್ ಉನ್ನತಿ '**ಅಮೃತ ಸ್ಟಾರ್ಟ್ ಅಪ್**' ಮೂಲಕ ಹಿಂದುಳಿದ ವರ್ಗದ ಸಮುದಾಯಗಳ ನವೋದ್ಯಮಗಳನ್ನು ಪ್ರೋತ್ಸಾಹಿಸಲು 40 ಹಿಂದುಳಿದ ವರ್ಗಗಳ ನವೋದ್ಯಮಗಳಿಗೆ ಗರಿಷ್ಠ ರೂ.25.00 ಲಕ್ಷಗಳ ವರೆಗೆ ಪ್ರೋತ್ಸಾಹಧನ ನೀಡಲು ರೂ.10.00 ಕೋಟಿ ಹಾಗೂ ಆಡಳಿತಾತ್ಮಕ ವೆಚ್ಚಗಳಿಗೆ ರೂ.50.00 ಲಕ್ಷಗಳನ್ನು ಸೇರಿ ಒಟ್ಟು ರೂ.10.50 ಕೋಟಿ ವೆಚ್ಚದಲ್ಲಿ ಯೋಜನೆಯ ಅನುಷ್ಠಾನಕ್ಕಾಗಿ ಪ್ರಸ್ತಾವನೆಯನ್ನು ಸಲ್ಲಿಸಿ ಆದೇಶ ಹೊರಡಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆರವರು ಕೋರಿರುತ್ತಾರೆ.

24/01/2022

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆಯಲ್ಲಿ ಹಿಂದುಳಿದ ವರ್ಗಗಳ 40 ನವೋದ್ಯಮಿಗಳಿಗೆ ಗರಿಷ್ಠ ರೂ.25.00 ಲಕ್ಷಗಳವರೆಗೆ ಪ್ರೋತ್ಸಾಹಧನ ನೀಡಲು ರೂ.10.00 ಕೋಟಿ ಹಾಗೂ ಆಡಳಿತಾತ್ಮಕ ವೆಚ್ಚಗಳಿಗೆ ರೂ.50.00 ಲಕ್ಷಗಳನ್ನು ಸೇರಿ ಒಟ್ಟು ರೂ.10.50 ಕೋಟಿ ವೆಚ್ಚದಲ್ಲಿ ಯೋಜನೆ ಅನುಷ್ಠಾನಕ್ಕಾಗಿ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಕಾರ್ಯಕ್ರಮವಾದ ಎಲಿವೇಟ್ ಉನ್ನತಿ 'ಅಮೃತ ಸ್ಟಾರ್ಟ್ ಅಪ್' ಕಾರ್ಯಕ್ರಮಕ್ಕಾಗಿ ಸದರಿ ಇಲಾಖೆಗೆ ಅನುದಾನ ವರ್ಗಾಯಿಸಲು ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3) ರಲ್ಲಿ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ 'ಅಮೃತ್ ಸ್ಟಾರ್ಟ್ ಅಪ್' ಯೋಜನೆಯನ್ನು ರೂ.10.50 ಕೋಟಿ ವೆಚ್ಚದಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(4) ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆಯಲ್ಲಿ 'ಅಮೃತ ಸ್ಟಾರ್ಟ ಅಪ್' ಯೋಜನೆಗೆ ಒಟ್ಟು ರೂ.10.50 ಕೋಟಿಗಳನ್ನು ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆ ಮೇಲೆ ಆರ್ಥಿಕ ಇಲಾಖೆಯು 2021-22 ನೇ ಸಾಲಿಗೆ ಲೆಕ್ಕಶಿರ್ಷಿಕೆ:2225-03-283-0-03 ರಡಿ ರೂ.15000.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದ್ದು, ಸದರಿ ಅನುದಾನದಲ್ಲಿ 40 ನವೋದ್ಯಮಿಗಳಿಗೆ ಗರಿಷ್ಠ ರೂ.25.00 ಲಕ್ಷಗಳವರೆಗೆ ಪ್ರೋತ್ಸಾಹ ಧನವನ್ನು ನೀಡಲು ಐ.ಟಿ.ಬಿ.ಟಿ ಇಲಾಖೆಗೆ ಒದಗಿಸುವಂತೆ ಕೋರಿರುವ ರೂ.10.50 ಕೋಟಿಗಳನ್ನು ಸದರಿ ಲೆಕ್ಕಶಿರ್ಷಿಕೆಯಿಂದ ಬಿಡುಗಡೆ ಮಾಡುವಂತೆ ಹಾಗೂ ಹಿಂದುಳಿದ ವರ್ಗಗಳ ನವೋದ್ಯಮಿಗಳಿಗೆ ಪ್ರೋತ್ಸಾಹಿಸಲು ಐಟಿಬಿಟಿ ಇಲಾಖೆಗೆ ರೂ.10.50 ಕೋಟಿಗಳನ್ನು ಲೆಕ್ಕಶಿರ್ಷಿಕೆ 2225-03-283-0-03 ರಡಿ ಬಿಡುಗಡೆ ಮಾಡಲು ಆರ್ಥಿಕ ಇಲಾಖೆ ಸಹಮತಿಸಿದೆ ಎಂದು ಅಭಿಪ್ರಾಯ ನೀಡಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 466 ಬಿಎಂಎಸ್ 2021,**
**ಬೆಂಗಳೂರು, ದಿನಾಂಕ: 24.01.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಮೂಲಕ ಸ್ವಾತಂತ್ರೋತ್ಸವದ ಅಮೃತ ಮಹೋತ್ಸವದ ಅಂಗವಾಗಿ 'ಅಮೃತ್ ಸ್ಟಾರ್ಟ್ ಅಪ್' ಯೋಜನೆಯನ್ನು ಅನುಷ್ಠಾನಗೊಳಿಸಿ ಸದರಿ ಯೋಜನೆಯ ಅಡಿಯಲ್ಲಿ ಆಯ್ಕೆಗೊಳ್ಳುವ 40 ಹಿಂದುಳಿದ ವರ್ಗಗಳ ನವೋದ್ಯಮಗಳಿಗೆ ಗರಿಷ್ಠ ರೂ.25.00 ಲಕ್ಷಗಳವರೆಗೆ ಪ್ರೋತ್ಸಾಹಧನ ನೀಡಲು ರೂ.10.00 ಕೋಟಿ ಹಾಗೂ ಆಡಳಿತಾತ್ಮಕ ವೆಚ್ಚಗಳಿಗೆ ರೂ.50.00 ಲಕ್ಷಗಳು ಸೇರಿ ಒಟ್ಟು ರೂ.10.50 ಕೋಟಿ ವೆಚ್ಚದಲ್ಲಿ ಈ ಕೆಳಕಂಡ ಷರತ್ತಿಗೊಳಪಟ್ಟು ಅನುಮತಿಸಲಾಗಿದೆ. ಈ ಕಾರ್ಯಕ್ರಮಕ್ಕೆ ತಗಲುವ ವೆಚ್ಚವನ್ನು ಲೆಕ್ಕಶಿರ್ಷಿಕೆ:2225-03-283-0-03 ಆಬ್ಜೆಕ್ಟಿವ್ ಕೋಡ್(059) ರಡಿ ಭರಿಸತಕ್ಕದ್ದು. ಲೆಕ್ಕ ಶೀರ್ಷಿಕೆ 2225-03-283-0-03 ಆಬ್ಜೆಕ್ಟಿವ್ ಕೋಡ್(059) ರಡಿ ರೂ.10.50 ಕೋಟಿಗಳನ್ನು

ಪ್ರ. 24/01/2022